**ಕರ್ನಾಟಕ ಸರ್ಕಾರ**

ಸಂಖ್ಯೆ:ಸಕಇ 491 ಪಕವಿ 2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ
ಬೆಂಗಳೂರು ದಿನಾಂಕ:19-09-2022.

**ಸುತ್ತೋಲೆ**

ವಿಷಯ: ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಗ್ರಂಥಾಲಯಗಳಿಗೆ ಪುಸ್ತಕಗಳನ್ನು ಖರೀದಿಸಲು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಯನ್ನು ರಚಿಸುವ ಕುರಿತು.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ಪ್ರಕಾಶಕರ ಸಂಘ (ರಿ) ಇವರ ಪತ್ರ ದಿನಾಂಕ:25-07-2022.

******

ಕರ್ನಾಟಕ ಪ್ರಕಾಶಕರ ಸಂಘವು ಸಾರ್ವಜನಿಕ ಗ್ರಂಥಾಲಯ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಗಳಲ್ಲಿರುವಂತೆ ಸಮಾಜ ಕಲ್ಯಾಣ ಇಲಾಖೆಯಲ್ಲೂ ಪುಸ್ತಕ ಖರೀದಿಗಾಗಿ ರಾಜ್ಯದ ಶಿಕ್ಷಣ ತಜ್ಞರು, ಸಾಹಿತಿಗಳು, ಕರ್ನಾಟಕ ಪ್ರಕಾಶಕರ ಸಂಘದ ಪ್ರತಿನಿಧಿಯನ್ನು ಒಳಗೊಂಡ ರಾಜ್ಯ ಮಟ್ಟದ ಪುಸ್ಕಕ ಆಯ್ಕೆ ಸಮಿತಿಯನ್ನು ರಚಿಸಿ ಆ ಸಮಿತಿ ಶಿಫಾರಸ್ಸು ಮಾಡಿದ ಪುಸ್ತಕಗಳನ್ನು ಖರೀದಿಸುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಅಂಶಗಳ ಹಿನ್ನಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪುಸ್ತಕಗಳನ್ನು ಖರೀದಿಸುವ ಸಲುವಾಗಿ ರಾಜ್ಯಮಟ್ಟದಲ್ಲಿ ಸರ್ಕಾರದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1 | ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ | ಅಧ್ಯಕ್ಷರು |
| 2 | ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| 3 | ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ. | ಸದಸ್ಯರು |
| 4 | ನಿರ್ದೇಶಕರು, ಪರಿಶಿಷ್ಟ ಪಂಗಡಗಳ ನಿರ್ದೇಶನಾಲಯ | ಸದಸ್ಯರು |
| 5 | ನಿರ್ದೇಶಕರು, ಡಾ|| ಬಿ.ಆರ್ ಅಂಬೇಡ್ಕರ್ ಸಂಶೋಧನಾ ಸಂಸ್ಥೆ. | ಸದಸ್ಯರು |
| 6 | ನಿರ್ದೇಶಕರು, ಡಾ|| ಬಾಬು ಜಗಜೀವನ ರಾಂ ಸಂಶೋಧನಾ ಸಂಸ್ಥೆ. | ಸದಸ್ಯರು |
| 7 | ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ | ಸದಸ್ಯರು |
| 8 | ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರತಿನಿಧಿ | ಸದಸ್ಯರು |

| | | |
|---|---|---|
| 9 | ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರತಿನಿಧಿ | ಸದಸ್ಯರು |
| 10 | ಯುವಜನ ಸೇವಾ ಮತ್ತು ಸಬಲೀಕರಣ ಇಲಾಖೆಯ ಪ್ರತಿನಿಧಿ | ಸದಸ್ಯರು |
| 11 | ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷರು/ರಿಜಿಸ್ಟ್ರರ್ | ಸದಸ್ಯರು |
| 12 | ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರು – ಆಡಳಿತಾಧಿಕಾರಿ. | ಸದಸ್ಯರು |
| 13 | ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಸೂಚಿಸಿದ ಪ್ರತಿನಿಧಿ | ಸದಸ್ಯರು |
| 14 | ಇಬ್ಬರು ಹಿರಿಯ ಸಾಹಿತಿಗಳು/ವಿಷಯ ತಜ್ಞರು | ಸದಸ್ಯರು |
| 15 | ಕರ್ನಾಟಕ ಪ್ರಕಾಶಕರ ಸಂಘದ ಮೂರು ಜನ ಪ್ರತಿನಿಧಿಗಳು | ಸದಸ್ಯರು |
| 16 | ಕರ್ನಾಟಕ ವಿಜ್ಞಾನ ಪರಿಷತ್ತಿನ ಪ್ರತಿನಿಧಿ | ಸದಸ್ಯರು |
| 17 | ಭಾರತೀಯ ವಿದ್ಯಾಭವನ ಪ್ರತಿನಿಧಿ | ಸದಸ್ಯರು |

ಈ ಆಯ್ಕೆ ಸಮಿತಿಯು ಆಯ್ಕೆ ಮಾಡಿದ ಪುಸ್ತಕಗಳನ್ನು ಕರ್ನಾಟಕ ಸರ್ಕಾರದ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನಿಯಮಗಳಂತೆ ಪುಟವಾರು ಮತ್ತು ಪುಸ್ತಕಗಳ ಅಳತೆಗೆ ತಕ್ಕಂತೆ ಬೆಲೆ ನಿಗದಿ ಮಾಡಿ ಖರೀದಿಸುವುದು.

(ಡಾ|| ಪ್ರಜ್ಞಾ ಅಮ್ಮೆಂಬಳ)
ಸರ್ಕಾರದ ಉಪ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವಜನ ಮತ್ತು ಸಬಲೀಕರಣ ಇಲಾಖೆಯ , ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಪರಿಶಿಷ್ಟ ವರ್ಗಗಳ ನಿರ್ದೇಶನಾಲಯ, ಬೆಂಗಳೂರು.
7. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
8. ನಿರ್ದೇಶಕರು, ಡಾ|| ಬಿ.ಆರ್ ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು.
9. ನಿರ್ದೇಶಕರು, ಡಾ|| ಬಾಬು ಜಗಜೀವನ ರಾಂ ಸಂಶೋಧನಾ ಸಂಸ್ಥೆ, ಬೆಂಗಳೂರು.

10. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
11. ಅಧ್ಯಕ್ಷರು, ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು.
12. ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು.
13. ಅಧ್ಯಕ್ಷರು ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
14. ಅಧ್ಯಕ್ಷರು, ಕರ್ನಾಟಕ ಪ್ರಕಾಶಕರ ಸಂಘ, ಬಸವನಗುಡಿ, ಬೆಂಗಳೂರು.
15. ನಿರ್ದೇಶಕರು, ಭಾರತೀಯ ವಿದ್ಯಾಭವನ, ರೇಸ್ ಕೋರ್ಸ್ ರೋಡ್, ಬೆಂಗಳೂರು.
16. ಅಧ್ಯಕ್ಷರು, ಕರ್ನಾಟಕ ವಿಜ್ಞಾನ ಪರಿಷತ್ತು, ಬನಶಂಕರಿ, ಬೆಂಗಳೂರು.
17. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ-1, 2 ಮತ್ತು 3, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ವಿಕಾಸಸೌಧ.

*****